**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560003**

ಸಂಖ್ಯೆ:ಎ8/ಪು.ವಿ.ನೋ.ಅ.ನಿ/57/2020-21 ದಿನಾಂಕ:18.12.2021

:: ಸುತ್ತೋಲೆ ::

ವಿಷಯ:- 2011ಕ್ಕೂ ಹಿಂದಿನ ವರ್ಷಗಳಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ನೋಂದಾಯಿಸಿ ಅನುತ್ತೀರ್ಣರಾದ ಎಲ್ಲಾ ವಿಧದ ಪುನರಾವರ್ತಿತ ಅಭ್ಯರ್ಥಿಗಳಿಗೆ (NSR & NSPR) ಅಂತಿಮವಾಗಿ ಪರೀಕ್ಷೆಗೆ ನೋಂದಾಯಿಸಲು ಅವಧಿ ನಿಗಧಿಗೊಳಿಸಿರುವ ಬಗ್ಗೆ

ಉಲ್ಲೇಖ:- ಸರ್ಕಾರದ ಆದೇಶ ಸಂಖ್ಯೆ:ಇಪಿ 177 ಎಸ್‌ಎಲ್‌ಬಿ 2021 ದಿನಾಂಕ:06.12.2021.

* * * * * *

2011ಕ್ಕೂ ಹಿಂದಿನ ವರ್ಷಗಳಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ನೋಂದಾಯಿಸಿ ಅನುತ್ತೀರ್ಣರಾದ ಎಲ್ಲಾ ವಿಧದ ಪುನರಾವರ್ತಿತ ಅಭ್ಯರ್ಥಿಗಳಿಗೆ (NSR & NSPR) ಅಂತಿಮವಾಗಿ ಪರೀಕ್ಷೆಗೆ ನೋಂದಾಯಿಸಲು ಅವಧಿ ನಿಗಧಿಗೊಳಿಸಿರುವ ಕುರಿತ ಉಲ್ಲೇಖಿತ ಸರ್ಕಾರದ ಆದೇಶದ ಪ್ರತಿಯನ್ನು ಈ ಸುತ್ತೋಲೆಯೊಂದಿಗೆ ಅನುಬಂಧಿಸಿ ಕಳುಹಿಸಿದೆ. ಸರ್ಕಾರದ ಆದೇಶದಲ್ಲಿ ಸೂಚಿಸಿರುವ ಅಂಶಗಳ ಕುರಿತು ತಮ್ಮ ಸ್ಥಳೀಯ ಹಂತದಲ್ಲಿ ವ್ಯಾಪಕ ಪ್ರಚಾರ ನೀಡಿ ಸಂಬಂಧಪಟ್ಟ ಎಲ್ಲಾ ಅಭ್ಯರ್ಥಿಗಳ ಮತ್ತು ಪೋಷಕರ ಗಮನಕ್ಕೆ ತಂದು ಸೂಕ್ತಕ್ರಮ ಕೈಗೊಳ್ಳಲು ತಿಳಿಸಿದೆ.

20/12

(ವಿ ಸುಮಂಗಲ)
ನಿರ್ದೇಶಕರು (ಪರೀಕ್ಷೆಗಳು)

**ಗೆ,**

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ಮತ್ತು ಜಿಲ್ಲಾ ನೋಡಲ್ ಅಧಿಕಾರಿಗಳು ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ (ಇಮೇಲ್ ಮುಖಾಂತರ).
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ (ಇಮೇಲ್ ಮುಖಾಂತರ).
3. ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಖಾಸಗಿ ಪ್ರೌಢ ಶಾಲೆಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ (ಶಾಲಾ ಲಾಗಿನ್ ಮುಖಾಂತರ).
4. ಶಾಖಾಧಿಕಾರಿಗಳು, ಗಣಕಶಾಖೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಮತ್ತು ಮಂಡಳಿ ಜಾಲತಾಣ ಮತ್ತು ಶಾಲಾ ಲಾಗಿನ್‌ನಲ್ಲಿ ಅಪ್‌ಲೋಡ್ ಮಾಡಲು ಸೂಚಿಸಿದೆ.
5. ಶಾಖಾಧಿಕಾರಿಗಳು ಸಿ , ಬಿ ಮತ್ತು ಲೆಕ್ಕಾಧಿಕಾರಿಗಳು, ಲೆಕ್ಕಪತ್ರ ಶಾಖೆರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
6. ಎಲ್ಲಾ ಪರಿಶೀಲನಾ ಶಾಖೆಯ ಶಾಖಾಧಿಕಾರಿಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
7. ಕಛೇರಿ ಪ್ರತಿ.

A8_letter1

Scanned with CamScanner

# ಕರ್ನಾಟಕ ಸರ್ಕಾರದ ನಡಾವಳಿಗಳು

ವಿಷಯ:- 2011ಕ್ಕೂ ಹಿಂದಿನ ವರ್ಷಗಳಲ್ಲಿ ಎಸ್ಎಸ್ಎಲ್‌ಸಿ ಪರೀಕ್ಷೆಗೆ ನೋಂದಾಯಿಸಿ ಅನುತ್ತೀರ್ಣರಾದ ಎಲ್ಲಾ ವಿಧದ ಪುನರಾವರ್ತಿತ ಅಭ್ಯರ್ಥಿಗಳಿಗೆ (NSR & NSPR) ಅಂತಿಮವಾಗಿ ಪರೀಕ್ಷೆಗೆ ನೋಂದಾಯಿಸಲು ಅವಧಿ ನಿಗಧಿಪಡಿಸುವ ಬಗ್ಗೆ.

ಓದಲಾಗಿದೆ:
1. ನಿರ್ದೇಶಕರು (ಪರೀಕ್ಷೆಗಳು), ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರುರವರ ಏಕ ಕಡತ ಸಂಖ್ಯೆ: ಸಂಖ್ಯೆ:ಎ8/ಪು.ವಿ.ನೋ.ಅ.ನಿ/57/2020-21.
2. ಮಂಡಳಿ ಅಧಿಸೂಚನೆ ಸಂಖ್ಯೆ: A8.PU.A.PRA.13/2010-11 ದಿನಾಂಕ:21.02.2011
3. ಮಂಡಳಿ ಸುತ್ತೋಲೆ ಸಂಖ್ಯೆ:ಎ8/ಪು.ಆ.ಪ್ರ/13/2010-11 ದಿನಾಂಕ:18.03.2011

* * * * *

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರಲ್ಲಿ ನಿರ್ದೇಶಕರು (ಪರೀಕ್ಷೆಗಳು), ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ಇವರ ಏಕ ಕಡತ ಸಂಖ್ಯೆ:ಎ8/ಪು.ವಿ.ನೋ.ಅ.ನಿ/57/2020-21ರಲ್ಲಿ ವಿವರಿಸಿರುವಂತೆ ಕ್ರಮಾಂಕ (2) ಮತ್ತು (3) ರನ್ವಯ ಮಾರ್ಚ್/ಏಪ್ರಿಲ್ 2011ರ ನಂತರ ಪರೀಕ್ಷೆ ತೆಗೆದುಕೊಂಡ ಶಾಲಾ ಅಭ್ಯರ್ಥಿಗಳು ಮತ್ತು ಪುನರಾವರ್ತಿತ ಅಭ್ಯರ್ಥಿಗಳು (CCERF, CCEPF, CCERR, CCEPR, NSR, NSPR) ನೋಂದಾಯಿಸಿಕೊಂಡ ಪರೀಕ್ಷೆಯಿಂದ ಸತತ ಆರು ಪರೀಕ್ಷೆಗಳಲ್ಲಿ (ಅಂದರೆ ಸತತ ಆರು ಪ್ರಯತ್ನಗಳಲ್ಲಿ, ಪರೀಕ್ಷೆಗೆ ನೋಂದಾಯಿಸಿದ ವರ್ಷದಿಂದ ಮೂರು ವರ್ಷದೊಳಗೆ) ತೇರ್ಗಡೆ ಹೊಂದಬೇಕು. ಇಲ್ಲವಾದಲ್ಲಿ ನಂತರದ ಪ್ರಯತ್ನದಲ್ಲಿ ಹೊಸದಾಗಿ ಖಾಸಗಿ ಅಭ್ಯರ್ಥಿಯಾಗಿ ನೋಂದಾಯಿಸಿಕೊಂಡು ಎಲ್ಲಾ ವಿಷಯಗಳಲ್ಲಿಯೂ ಹೊಸದಾಗಿ ಪರೀಕ್ಷೆ ತೆಗೆದುಕೊಳ್ಳಬೇಕು. ವಿದ್ಯಾರ್ಥಿಗೆ ಒದಗಿಸಿರುವ 06 ಸತತ ಪ್ರಯತ್ನಗಳಲ್ಲಿ ವಿದ್ಯಾರ್ಥಿಯು ಯಾವುದೇ ಕಾರಣಗಳಿಂದ ಯಾವುದಾದರೂ ಪರೀಕ್ಷೆ ತೆಗೆದುಕೊಳ್ಳದೇ ಇದ್ದಲ್ಲಿ ಆ ಪರೀಕ್ಷೆಯನ್ನು ಕೂಡ ಒಂದು ಪ್ರಯತ್ನ ಎಂದು ಗಣನೆಗೆ ತೆಗೆದುಕೊಳ್ಳಲಾಗುತ್ತಿದೆ.

ಆದರೆ, 2011ಕ್ಕೂ ಹಿಂದಿನ ವರ್ಷಗಳಲ್ಲಿ ಪರೀಕ್ಷೆಗೆ ನೋಂದಾಯಿಸಿ ಅನುತ್ತೀರ್ಣರಾದ ಎಲ್ಲಾ ವಿಧದ ಪುನರಾವರ್ತಿತ ಅಭ್ಯರ್ಥಿಗಳಿಗೆ (NSR & NSPR) ಈ ನಿಯಮ ಅನ್ವಯವಾಗದ ಕಾರಣ 2011ಕ್ಕೂ ಹಿಂದಿನ ವರ್ಷಗಳಲ್ಲಿ ಅನುತ್ತೀರ್ಣರಾದ ಪುನರಾವರ್ತಿತ ಅಭ್ಯರ್ಥಿಗಳು ಪ್ರಸಕ್ತ ವರ್ಷಗಳಲ್ಲಿ ಪರೀಕ್ಷೆಗೆ ನೋಂದಾಯಿಸುತ್ತಿದ್ದು ಅಲ್ಲದೇ ಮುಂದಿನ ಯಾವುದೇ ವರ್ಷದಲ್ಲಿ ನೋಂದಾಯಿಸಬಹುದಾಗಿರುವುದರಿಂದ ಈ ಅಭ್ಯರ್ಥಿಗಳಿಗೆ ಪ್ರಶ್ನೆಪತ್ರಿಕೆ ತಯಾರಿಸುವಾಗ ಮತ್ತು ಅಂಕಪಟ್ಟಿಯನ್ನು ಪ್ರತ್ಯೇಕ ನಮೂನೆಯಲ್ಲಿ ನೀಡುತ್ತಿರುವುದರಿಂದ ಗೊಂದಲಗಳು ಉಂಟಾಗುತ್ತಿದ್ದು, ಆಡಳಿತಾತ್ಮಕ ದೃಷ್ಟಿಯಿಂದ ಹಾಗೂ ಗೊಂದಲಗಳನ್ನು ನಿವಾರಿಸಲು ಮತ್ತು ಏಕರೂಪತೆಯನ್ನು ತರುವಂತಹ ನಿಟ್ಟಿನಲ್ಲಿ 2011ಕ್ಕೂ ಹಿಂದಿನ ವರ್ಷಗಳಲ್ಲಿ ಅನುತ್ತೀರ್ಣರಾದ

Scanned with CamScanner

ಎಲ್ಲಾ (NSR & NSPR) ಪುನರಾವರ್ತಿತ ವಿದ್ಯಾರ್ಥಿಗಳಿಗೆ ಪ್ರಸ್ತುತ 2022ರ ಮುಖ್ಯ ಪರೀಕ್ಷೆಯಿಂದ ಸತತ ಆರು ಪ್ರಯತ್ನಗಳ ಅವಕಾಶ ನೀಡಿ (2024ರ ಪೂರಕ ಪರೀಕ್ಷೆ ಅಂತಿಮ ಪ್ರಯತ್ನ) ತೇರ್ಗಡೆ ಹೊಂದಲು ಅವಕಾಶ ನೀಡುವುದು. ಇಲ್ಲವಾದಲ್ಲಿ ಈ ಎಲ್ಲಾ ಅಭ್ಯರ್ಥಿಗಳು ಜೂನ್/ಜುಲೈ 2024ರ ಪೂರಕ ಪರೀಕ್ಷೆಯ ನಂತರ ಹೊಸದಾಗಿ ಖಾಸಗಿ ವಿದ್ಯಾರ್ಥಿಗಳಾಗಿ ನೋಂದಾಯಿಸಿ ಪರೀಕ್ಷೆಯನ್ನು ತೆಗೆದುಕೊಳ್ಳಲು ಕ್ರಮ ವಹಿಸಬಹುದಾಗಿರುತ್ತದೆ. ಈ ಮೇಲಿನ ಪ್ರಕ್ರಿಯೆಯನ್ನು ಅನುಷ್ಠಾನಗೊಳಿಸಲು ದಿನಾಂಕ:21.01.2021ರಂದು ನಡೆದ ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯ ಸರ್ವ ಸದಸ್ಯರ ಸಭೆಯಲ್ಲಿ ಚರ್ಚೆ ನಡೆಸಿ, ಈ ವಿಷಯದ ಬಗ್ಗೆ ತೀರ್ಮಾನಿಸಲಾಗಿರುತ್ತದೆ.

ಈ ಸಂಬಂಧ 2011ಕ್ಕೂ ಹಿಂದಿನ ವರ್ಷಗಳಲ್ಲಿ ಅನುತ್ತೀರ್ಣರಾದ ಎಲ್ಲಾ ವಿಧದ ಪುನರಾವರ್ತಿತ ವಿದ್ಯಾರ್ಥಿಗಳು (NSR & NSPR) ಅನುತ್ತೀರ್ಣವಾಗಿ ಬಾಕಿ ಇರುವ ವಿಷಯಗಳಿಗೆ 2024ರ ಪೂರಕ ಪರೀಕ್ಷೆಯೊಳಗೆ ಪರೀಕ್ಷೆ ತೆಗೆದುಕೊಂಡು ಉತ್ತೀರ್ಣರಾಗುವುದು, ಇಲ್ಲವಾದಲ್ಲಿ ನಿಯಮಾನುಸಾರ ಹೊಸದಾಗಿ ಖಾಸಗಿ ಅಭ್ಯರ್ಥಿಯಾಗಿ ನೋಂದಾಯಿಸಿಕೊಂಡು ಎಲ್ಲಾ ವಿಷಯಗಳ ಪರೀಕ್ಷೆಯನ್ನು ತೆಗೆದುಕೊಳ್ಳುವ ಕುರಿತು ಮೇಲೆ ಓದಲಾದ ಕ್ರಮ ಸಂಖ್ಯೆ(1)ರಲ್ಲಿ ನಿರ್ದೇಶಕರು (ಪರೀಕ್ಷೆಗಳು)ರವರು ಸರ್ಕಾರದ ಆದೇಶವನ್ನು ಹೊರಡಿಸುವಂತೆ ಕೋರಿರುತ್ತಾರೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿದ್ದು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಪಿ 177 ಎಸ್‌ಎಲ್‌ಬಿ 2021,**
**ಬೆಂಗಳೂರು, ದಿನಾಂಕ: 6 ನೇ ಡಿಸೆಂಬರ್ 2021**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, 2011ಕ್ಕೂ ಹಿಂದಿನ ವರ್ಷಗಳಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಎಲ್ಲಾ ವಿಧದ ಪುನರಾವರ್ತಿತ (NSR & NSPR) ಅಭ್ಯರ್ಥಿಗಳು ಅನುತ್ತೀರ್ಣವಾಗಿ ಬಾಕಿ ಇರುವ ವಿಷಯಗಳಿಗೆ 2022ರ ವರ್ಷದ ಮುಖ್ಯ ಪರೀಕ್ಷೆಯಿಂದ ಸತತ ಆರು ಪ್ರಯತ್ನಗಳ ಅವಕಾಶ ನೀಡಿ 2024ರ ಪೂರಕ ಪರೀಕ್ಷೆಯವರೆಗೆ ಪರೀಕ್ಷೆ ತೆಗೆದುಕೊಂಡು ಉತ್ತೀರ್ಣರಾಗಲು ಅವಕಾಶ ಕಲ್ಪಿಸಲಾಗಿದೆ. ಈ ಅವಕಾಶದ ನಂತರವೂ ಅನುತ್ತೀರ್ಣರಾಗುವ ಅಭ್ಯರ್ಥಿಗಳು 2025ರ ಎಸ್.ಎಸ್.ಎಲ್.ಸಿ ಮುಖ್ಯ ಪರೀಕ್ಷೆಯಿಂದ ನಿಯಮಾನುಸಾರ ಹೊಸದಾಗಿ ಖಾಸಗಿ ಅಭ್ಯರ್ಥಿಯಾಗಿ ನೋಂದಾಯಿಸಿಕೊಂಡು ಎಲ್ಲಾ ವಿಷಯಗಳ ಪರೀಕ್ಷೆಯನ್ನು ತೆಗೆದುಕೊಳ್ಳತಕ್ಕದೆಂದು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

Ch 6/12

(ಚಂದ್ರಶೇಖರ್)
ಸರ್ಕಾರದ ಅಪರ ಕಾರ್ಯದರ್ಶಿ(ಆಡಳಿತ)
ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ)

ರವರಿಗೆ,

1. ಪ್ರಧಾನ ಮಹಾ ಲೇಖಪಾಲರು - ಕರ್ನಾಟಕ (ಎ ಮತ್ತು ಇ), ಬೆಂಗಳೂರು.

Scanned with CamScanner

2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ/ಧಾರವಾಡ
4. ನಿರ್ದೇಶಕರು (ಪ್ರೌಢ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು
5. ನಿರ್ದೇಶಕರು (ಪರೀಕ್ಷೆಗಳು), ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು.
6. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ.
7. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ (ಸಂಬಂಧಿಸಿದ ಉಪ ನಿರ್ದೇಶಕರ ಮುಖಾಂತರ)
8. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಪ್ರತಿ :-

1. ಸರ್ಕಾರದ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು. ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ರವರ ಆಪ್ತ ಸಹಾಯಕರು. ಬಹುಮಹಡಿಗಳ ಕಟ್ಟಡ, ಬೆಂಗಳೂರು.

Scanned with CamScanner